**ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ**
**ನ್ಯಾಯಾಲಯ, ಕನಕಪುರ**

**<u>ಸಿ.ಸಿ ನಂ. 132/2015</u>**

ದಿನಾಂಕಃ**. 25.02.2026.** ರಂದು ಸಾಕ್ಷಿಗೆ ಮದ್ಯಾಹ್ನ **1.35** ಗಂಟೆಗೆ ಪ್ರಮಾಣ ವಚನ ಭೋದಿಸಲಾಯಿತು.

| ಚಾಸಾ-**6** | ಪ್ರಾಸಾ-**5** |
|---|---|
| ಹೆಸರು | - ಶಿವಣ್ಣ |
| ತಂದೆ ಹೆಸರು | - ಮೋಟೇಗೌಡ |
| ವಯಸ್ಸು | - **47** |
| ಉದ್ಯೋಗ | - ವ್ಯವಸಾಯ |
| ವಿಳಾಸ | - ಹೊಂಗಾಣಿದೊಡ್ಡಿ |

**<u>ಮುಖ್ಯವಿಚಾರಣೆ : ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರಿಂದಃ-</u>**

ಸಾಕ್ಷಿ ಪಂಚನಾಮೆಯನ್ನು ನೋಡಿ ಅದರಲ್ಲಿರುವ ಒಂದು ಸಹಿಯನ್ನು ನೋಡಿ ತನ್ನ ಸಹಿ ಎಂದು ಗುರುತಿಸಿದ್ದು, ಸದರಿ **ಪಂಚನಾಮೆಯನ್ನು** ಈಗಾಗಲೇ ನಿಪಿ-**1** ಎಂದು, ಸಾಕ್ಷಿ ಸಹಿಯನ್ನು ನಿಪಿ-**1(**ಡಿ**)** ಎಂದು ಗುರುತಿಸಲಾಯಿತು.

ನಾನು ಪೋಲಿಸರಿಗೆ ಯಾವುದೇ ಹೇಳಿಕೆ ಕೊಟ್ಟಿಲ್ಲ.

(ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.)

**<u>ಪಾಟೀ ಸವಾಲುಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>**

ದಿ**. 24.03.2014** ರಂದು ಮದ್ಯಾಹ್ನ **3** ಗಂಟೆಯಿಂದ **4** ಗಂಟೆವರೆಗೆ ಚಾಸಾ-**1** ರವರು ನನ್ನ ಹಾಗೂ ಚಾ**,**ಸಾ**.5** ಮತ್ತು **7** ರವರ ಸಮಕ್ಷಮ ಪೊಲೀಸರು ನಿಪಿ- **1**

ರ ಪ್ರಕಾರ  ಪಂಚನಾಮೆ ಮಾಡಿ ನಿ.ಪಿ.**1** ರಲ್ಲಿ ಹೇಳಿರುವ ಮದ್ಯವನ್ನು ವಶಪಡಿಸಿಕೊಂಡರು ಎಂದರೆ ಸರಿಯಲ್ಲ.

ಸಾಕ್ಷಿಗೆ ದಿಃ**24.03.2014** ರಂದು ಅವನು ಪೊಲೀಸರಿಗೆ ನೀಡಿದ ಎಂಬ ಮರು ಹೇಳಿಕೆಯ ಭಾಗವಾದ "ದಿ**24.03.2014 …….**ಗುರುತಿಸುತ್ತೇನೆ", ಓದಿ ಹೇಳಿದಾಗ ಅಲ್ಲಗಳೆದಿದ್ದರಿಂದ ಸದರಿ ಹೇಳಿಕೆ ಭಾಗವನ್ನು **ನಿಪಿ-6** ಎಂದು ಗುರುತಿಸಲಾಯಿತು.

ಆರೋಪಿಯೊಂದಿಗೆ ರಾಜಿ ಮಾಡಿಕೊಂಡಿರುವ ಕಾರಣ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು: ಆರೋಪಿ ಪರ ಶ್ರೀ. ವಕೀಲರಿಂದಃ**

ಆರೋಪಿ ಪರ ವಕೀಲರು ಪಾಟೀ ಸವಾಲು ಇಲ್ಲ ಎಂದು ಹೇಳಿರುತ್ತಾರೆ.

ಮರುವಿಚಾರಣೆ ಇಲ್ಲ.

(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಮದ್ಯಾಹ್ನ **1.45** ಗಂಟೆಯವರೆಗೆ ಪಡೆದುಕೊಂಡಿರುತ್ತೇನೆ ಎಂದು ಧೃಢೀಕರಿಸುತ್ತೇನೆ)

ಓದಿ ಹೇಳಿ ಕೇಳಿ ಸರಿ ಇದೆ,

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**